ಶಿವಮೊಗ್ಗ ಜಿಲ್ಲಾಧಿಕಾರಿಗಳ ಕಛೇರಿಯಂ ನಿರ್ಮಾಣದ ಬಗ್ಗೆ

೯೩೨ ಶ್ರೀ, ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ).—ಮಾನ್ಯ ಕಂದಾಯಂ ಹಾಗೂ ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಶಿವಮೊಗ್ಗ ಜಿಲ್ಲಾಧಿಕಾರಿಗಳ ಕಛೇರಿ (ಮಿನಿ ವಿಧಾನಸೌಧ) ಕಟ್ಟಡದ ಕಾರ್ಯವು ಸ್ಥಗಿತ ಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಇದುವರೆವಿಗೂ ಈ ಬಗ್ಗೆ ಎಷ್ಟು ಹಣ ವಿಚ್ಚಾಗಿದೆ.

ಇ) ಕಟ್ಟಡ ನಿರ್ಮಾಣ ಪೂರ್ಣಗೊಳ್ಳಲು ಎಷ್ಟು ಹಣ ಬೇಕಾಗುವುದು.

ಈ) ಈ ಕಟ್ಟಡ ನಿರ್ಮಾಣ ಕಾರ್ಯ ಯಾವಾಗ ಪೂರ್ಣಗೊಳ್ಳುವುದು ?

ಶ್ರೀ ಕೆ.ಹೆಚ್. ಪಾಟೀಲ್ (ಕಂದಾಯ ಹಾಗೂ ಕಾರ್ಮಿಕ ಮಂತ್ರಿಗಳು).—

ಅ) ಇಲ್ಲ. ಕಟ್ಟಡದ ನಿರ್ಮಾಣ ಕಾರ್ಯ ನಿಧಾನವಾಗಿ ಸಾಗುತ್ತಿದೆ.

ಆ) ರೂ. ೨೬.೭೯ ಲಕ್ಷ.

ಇ) ಸುಮಾರೂ ರೂ. ೨.೮೦ ಕೋಟಿ ಆಗಬಹುದೆಂದು ಅಂದಾಜಿಸಲಾಗಿದೆ.

ಈ) ಸಧ್ಯದಲ್ಲಿ ಸಾಕಷ್ಟು ಅನುದಾನವಿಲ್ಲದ ಕಾರಣ ನಿರ್ಮಾಣ ಕಾರ್ಯ ತ್ವರಿತವಾಗಿ ಆಗುತ್ತಿಲ್ಲ ಅನುದಾನ ಬಿಡುಗಡೆ ಆದ ತಕ್ಷಣ ಆದಷ್ಟು ಜಾಗ್ರತೆಯಿಂದ ನಿರ್ಮಾಣ ಕಾರ್ಯ ಮುಗಿಸಲಾಗುತ್ತದೆ.

ಮುಂಡರಗಿಯಲ್ಲಿರುವ ತಾಲ್ಲೂಕು ಕಛೇರಿ ಕಟ್ಟಡವು ಶಿಥಿಲವಾಗಿರುವ ಬಗ್ಗೆ.

೯೧೦ ಶ್ರೀ ಕೆ. ಹೆಚ್. ಕುರಡಗಿ (ಮುಂಡರಗಿ). ಮಾನ್ಯ ಕಂದಾಯಂ ಹಾಗೂ ಕಾರ್ಮಿಕ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ಮುಂಡರಗಿ ತಾಲ್ಲೂಕಿನಲ್ಲಿರುವ ತಾಲ್ಲೂಕು ಕಚೇರಿಯ ಕಟ್ಟಡವು ಶಿಥಿಲವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

ಆ) ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು,

ಇ) ಈ ತಾಲ್ಲೂಕಿನಲ್ಲಿ ದಾನ ರೂಪದಲ್ಲಿ ಸರ್ಕಾರಕ್ಕೆ ಬಂದಿರುವ ಎರಡು ಎಕರೆ ಜಮೀನಿನಲ್ಲಿ ಕಚೇರಿಗಳು ಕಟ್ಟಡಗಳನ್ನು ನಿರ್ಮಿಸಲು ಕೈಗೊಂಡಿರುವ ಕ್ರಮವೇನು.

ಈ) ಮುಂಡರಗಿಯಲ್ಲಿ ಮಿನಿ ವಿಧಾನಸೌಧವನ್ನು ನಿರ್ಮಿಸುವ ಸಲುವಾಗಿ ಕೈಗೊಂಡಿರುವ ಕ್ರಮವೇನು ?

ಶ್ರೀ ಕೆ. ಹೆಚ್. ಪಾಟೀಲ್. (ಕಂದಾಯ ಹಾಗೂ ಕಾರ್ಮಿಕ ಮಂತ್ರಿಗಳು).—

ಅ) ಬಂದಿದೆ.

ಆ) ಈಗಾಗಲೇ ಪ್ಲಾನ್ ತಯಾರು ಮಾಡಿದ್ದು ಅಗತ್ಯ ಹಣ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯವರನ್ನು ಕೋರಲಾಗಿದೆ.

ಇ) ಈ ಜಮೀನನ್ನು ಲೋಕೋಪಯೋಗಿ ಇಲಾಖೆಗೆ ವಹಿಸಿಕೊಡಲಾಗಿದ್ದು ಉಪಖಜಾನೆ ಇಲಾಖೆ ಕಟ್ಟಡ ಕಟ್ಟಲು ಈಗಾಗಲೇ ನಕ್ಷೆ ತಯಾರಾಗಿರುತ್ತದೆ.

ಈ) ಸರ್ಕಾರದಿಂದ ಅನುದಾನ ಬರಬೇಕಾಗಿದೆ. ಬಂದಕೂಡಲೇ ಕಟ್ಟಡದ ಕೆಲಸವನ್ನು ಪ್ರಾರಂಭಿಸಲಾಗುತ್ತದೆ.